**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** "ಶಕ್ತಿ ಯೋಜನೆ"ಯಡಿ ನವೆಂಬರ್-2025ರ ಮಾಹೆಯ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಸಾರಿಇ 81 ಸ್ವೀರಸ 2025, ದಿನಾಂಕ:29.04.2025.
2. ಸರ್ಕಾರದ ಆದೇಶ ಸಂಖ್ಯೆ: ಟಿಡಿ 18 ಟಿಸಿಬಿ 2023, ದಿ:05.06.2023 ಮತ್ತು ಸರ್ಕಾರದ ಆದೇಶ ಸಂಖ್ಯೆ:ಟಿಡಿ 18 ಟಿಸಿಬಿ 2023 (ಭಾ-1), ದಿನಾಂಕ:11.09.2023, 02.03.2024, ಮತ್ತು 05.05.2025.
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 212 ವೆಚ್ಚ-11 2025, ದಿನಾಂಕ:09.04.2025.
4. ಸರ್ಕಾರದ ಆದೇಶ ಸಂಖ್ಯೆ: ಟಿಡಿ 22 ಟಿಸಿಬಿ 2024, ದಿನಾಂಕ:31.03.2025 ಮತ್ತು ತಿದ್ದುಪಡಿ ಆದೇಶ ಸಂಖ್ಯೆ: ದಿನಾಂಕ:04.04.2025.
5. ಸರ್ಕಾರದ ಆದೇಶ ಸಂಖ್ಯೆ: ಟಿಡಿ 27 ಟಿಸಿಬಿ 2025, ದಿನಾಂಕ:14.05.2025, 20.06.2025, 24.07.2025 22.08.2025, 20.09.2025 ಮತ್ತು 24.10.2025.

**ಪ್ರಸ್ತಾವನೆ**:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ, 2025-26ನೇ ಸಾಲಿನ ಆಯವ್ಯಯದಲ್ಲಿ ಶಕ್ತಿ ಯೋಜನೆಗಾಗಿ ಲೆಕ್ಕ ಶೀರ್ಷಿಕೆ 3055-00-190-0-16-106-ಸಹಾಯಧನದಡಿ ರೂ.376300.00 ಲಕ್ಷಗಳು, 3055-00-190-0-16-422-ಪರಿಶಿಷ್ಟ ಜಾತಿ ಉಪಯೋಜನೆ ಯಡಿ (SCSP) ರೂ.106000.00 ಲಕ್ಷಗಳು ಹಾಗೂ 3055-00-190-0-16-423-ಗಿರಿ ಜನ ಉಪಯೋಜನೆ ರಡಿ (TSP) ರೂ.47700.00 ಲಕ್ಷಗಳು ಸೇರಿದಂತೆ, ಒಟ್ಟಾರೆ ರೂ.530000.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶಗಳಲ್ಲಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, (ಕ.ರಾ.ರ.ಸಾ.ನಿ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬೆಂ.ಮ.ಸಾ.ಸಂಸ್ಥೆ), ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾ.ಕ.ರ.ಸಾ.ಸಂಸ್ಥೆ) ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ (ಕ.ಕ.ರ.ಸಾ.ನಿಗಮ) ಸಾರಿಗೆಗಳಲ್ಲಿ ಕರ್ನಾಟಕ ರಾಜ್ಯಾದ್ಯಂತ ನಗರ, ಸಾಮಾನ್ಯ ಹಾಗೂ ವೇಗದೂತ (Express) ಬಸ್ಸುಗಳಲ್ಲಿ ಕರ್ನಾಟಕ ರಾಜ್ಯದ (Domicile of Karnataka) ಎಲ್ಲಾ ಮಹಿಳೆಯರು (ವಿದ್ಯಾರ್ಥಿನಿಯರು ಸೇರಿದಂತೆ) ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಉಚಿತವಾಗಿ ಪ್ರಯಾಣಿಸಲು ಕೆಲವು ಷರತ್ತುಗಳನ್ನು ವಿಧಿಸಿ ದಿನಾಂಕ:11.06.2023ರಿಂದ ಶಕ್ತಿ ಯೋಜನೆಯನ್ನು ಜಾರಿಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ ಹಾಗೂ ನಾಲ್ಕು ಸಾರಿಗೆ ಸಂಸ್ಥೆಗಳ ವ್ಯಾಪ್ತಿಯ ಜಿಲ್ಲೆಗಳಿಗೆ ಹೊಂದಿಕೊಂಡಿರುವ ನೆರೆ ರಾಜ್ಯದ ಗ್ರಾಮ/ ಸ್ಥಳಗಳಿಗೆ ಕಾರ್ಯಾಚರಿಸುತ್ತಿರುವ ಕೆಲವು ಆಯ್ದ ಅಂತರರಾಜ್ಯ ಸಾರಿಗೆಗಳಲ್ಲಿ ರಾಜ್ಯದ ಗಡಿಯವರೆಗೆ (ಕರ್ನಾಟಕ ರಾಜ್ಯದ ಒಳಗಡೆ ಮಾತ್ರ) ಮತ್ತು ಎನ್‌ಕ್ಲೇವ್ ಸಾರಿಗೆಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ "ಶಕ್ತಿ ಯೋಜನೆ"ಯಡಿ ಅವಕಾಶ ಕಲ್ಪಿಸಿರುವ ಸಾರಿಗೆ ನಿಗಮಗಳ ಕ್ರಮಕ್ಕೆ ಘಟನೋತ್ತರ ಅನುಮೋದನೆ ನೀಡಿ ಆದೇಶಿಸಲಾಗಿದೆ ಮತ್ತು ಶಕ್ತಿ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸುವ ಪ್ರಕ್ರಿಯೆಯ ಅವಧಿಯನ್ನು ದಿನಾಂಕ:11.06.2023 ರಿಂದ ದಿನಾಂಕ:10.09.2025 ರವರೆಗೆ ವಿಸ್ತರಿಸಿ, ಸದರಿ ಕಾಲಾವಧಿಯೊಳಗಾಗಿ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು ಎಂದು ಸಹ ಆದೇಶಿಸಲಾಗಿದೆ.

...2

Scanned with OKEN Scanner

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ 2025-26ನೇ ಸಾಲಿಗೆ ಆಯವ್ಯಯದಲ್ಲಿ ಒದಗಿಸಿದ ಅನುದಾನದ ಬಿಡುಗಡೆಯು ಈಗಾಗಲೇ ಅನುಮೋದಿಸಿದ ಮೂಲ ಯೋಜನೆಯಂತೆ ಶಕ್ತಿ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸುವ ಷರತ್ತಿಗೆ ಒಳಪಟ್ಟಿರುತ್ತದೆ ಎಂದು ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಸರ್ಕಾರದ ಆದೇಶಗಳಲ್ಲಿ, ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಿಗೆ 2025-26ನೇ ಸಾಲಿನಲ್ಲಿ ಶಕ್ತಿ ಯೋಜನೆಯ ಅನುಷ್ಠಾನಕ್ಕಾಗಿ 2024-25ನೇ ಸಾಲಿನಲ್ಲಿ ಪುನರ್‌ವಿನಿಯೋಗದ ಮೂಲಕ ಒದಗಿಸಿರುವ ರೂ.60000.00 ಲಕ್ಷಗಳನ್ನು ಮುಂಗಡವಾಗಿ ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆದೇಶಗಳಲ್ಲಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಸಾರಿಗೆಗಳಲ್ಲಿ ಏಪ್ರಿಲ್-2025, ಮೇ-2025, ಜೂನ್-2025, ಜುಲೈ-2025, ಆಗಸ್ಟ್-2025, ಸೆಪ್ಟೆಂಬರ್-2025 ಮತ್ತು ಅಕ್ಟೋಬರ್-2025ರ ಮಾಹೆಗಳಲ್ಲಿ ಪ್ರಯಾಣಿಸಲು ವಿತರಿಸಿರುವ ಶೂನ್ಯ ಟಿಕೆಟ್‌ಗಳ ವೆಚ್ಚಕ್ಕಾಗಿ ಕ.ರಾ.ರ.ಸಾ.ನಿಗಮಕ್ಕೆ ರೂ.96727.40 ಲಕ್ಷಗಳು, ಬೆಂ.ಮ.ಸಾ.ಸಂಸ್ಥೆಗೆ ರೂ. 42,693.75 ಲಕ್ಷಗಳು, ವಾ.ಕ.ರ.ಸಾ.ಸಂಸ್ಥೆಗೆ ರೂ. 60763.15 ಲಕ್ಷಗಳು ಮತ್ತು ಕ.ಕ.ರ.ಸಾ.ನಿಗಮಕ್ಕೆ ರೂ.49049.00 ಲಕ್ಷಗಳು ಸೇರಿದಂತೆ ಒಟ್ಟು ರೂ.249233.30 ಲಕ್ಷಗಳನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಟಿಡಿ 27 ಟಿಸಿಬಿ 2025, ಬೆಂಗಳೂರು, ದಿನಾಂಕ:17.11.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಿಗೆ ಶಕ್ತಿ ಯೋಜನೆಯಡಿ ನವೆಂಬರ್-2025ರ ಮಾಹೆಯಲ್ಲಿ ರಾಜ್ಯದ ಮಹಿಳೆಯರು ಉಚಿತವಾಗಿ ಪ್ರಯಾಣಿಸಲು ವಿತರಿಸಲಾಗುವ ಶೂನ್ಯ ಟಿಕೇಟ್‌ಗಳ ವೆಚ್ಚಕ್ಕೆ ಮುಂಗಡವಾಗಿ ರೂ.44166.66 ಲಕ್ಷಗಳನ್ನು (ನಲವತ್ತಾಲ್ಕು ಸಾವಿರದ ಒಂದು ನೂರ ಅರವತ್ತಾರು ಲಕ್ಷದ ಅರವತ್ತಾರು ಸಾವಿರ ರೂಪಾಯಿಗಳು ಮಾತ್ರ) ಈ ಕೆಳಕಂಡಂತೆ ಷರತ್ತುಗಳಿಗೊಳಪಟ್ಟು ಶೇಕಡವಾರು ಅನುಪಾತದನ್ವಯ ನಿಗಮವಾರು ಬಿಡುಗಡೆಗೊಳಿಸಿ ಆದೇಶಿಸಿದೆ.

(ರೂ. ಲಕ್ಷಗಳಲ್ಲಿ)

| ನವೆಂಬರ್-2025 | | | | |
|---|---|---|---|---|
| ಸಂಸ್ಥೆಗಳು | ಲೆಕ್ಕ ಶೀರ್ಷಿಕೆ | | | ಒಟ್ಟು ಬಿಡುಗಡೆ ಮೊತ್ತ |
| | 3055-00-190-0-16-106-ಸಹಾಯಧನ | 3055-00-190-0-16-422-ಎಸ್.ಸಿ.ಎಸ್.ಪಿ. | 3055-00-190-0-16-423-ಟಿ.ಎಸ್.ಪಿ | |
| ಕ.ರಾ.ರ.ಸಾ.ನಿಗಮ | 12170.17 | 3428.21 | 1542.70 | **17141.08** |
| ಬೆಂ.ಮ.ಸಾ.ಸಂಸ್ಥೆ | 5371.68 | 1513.15 | 680.92 | **7565.75** |
| ವಾ.ಕ.ರ.ಸಾ.ಸಂಸ್ಥೆ | 7645.16 | 2153.57 | 969.10 | **10767.83** |
| ಕ.ಕ.ರ.ಸಾ.ನಿಗಮ | 6171.32 | 1738.40 | 782.28 | **8692.00** |
| **ಒಟ್ಟು** | **31358.33** | **8833.33** | **3975.00** | **44166.66** |

**ಷರತ್ತುಗಳು:**

1. ನಾಲ್ಕು ಸಾರಿಗೆ ಸಂಸ್ಥೆಗಳ ನವೆಂಬರ್-2025ರ ಮಾಹೆಯ ವಾಸ್ತವಿಕ ವೆಚ್ಚದ ಕ್ರೋಢೀಕೃತ ವಿವರಗಳನ್ನು (ವಿಭಾಗವಾರು) ಶಕ್ತಿ ಯೋಜನೆಯ ನೋಡಲ್ ಸಂಸ್ಥೆಯಾದ ಕ.ರಾ.ರ.ಸಾ.ನಿಗಮವು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

...3

Scanned with OKEN Scanner

2. ಸದರಿ ಅನುದಾನದ ಬಿಡುಗಡೆಯು ಶಕ್ತಿ ಸ್ಮಾರ್ಟ್ ಕಾರ್ಡ್‌ಗಳನ್ನು ಕೂಡಲೇ ವಿತರಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
3. ನಾಲ್ಕು ಸಾರಿಗೆ ಸಂಸ್ಥೆಗಳು ಬಿಡುಗಡೆ ಮಾಡಿರುವ ಅನುದಾನದ ಬಳಕೆ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಬಿಡುಗಡೆ ಮಾಡಿರುವ ಅನುದಾನವನ್ನು ನಾಲ್ಕು ಸಾರಿಗೆ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರುಗಳು ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ಇವರಿಂದ ಪೇಯೀಸ್ ರಶೀದಿಗೆ ಮೇಲು ರುಜು ಪಡೆದು ರಾಜ್ಯ ಹುಜೂರು ಖಜಾನೆಯಿಂದ ಡ್ರಾ ಮಾಡಲು ಅನುಮತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ:ಆಇ 229 ವೆಚ್ಚ-11/2025, ದಿನಾಂಕ:15.11.2025ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ರಂಗಪ್ಪ ಕರಿಗಾರ)**
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಸಾರಿಗೆ ಇಲಾಖೆ.
17/11/25

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಆಡಿಟ್-II) / (ಎ&ಇ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ.
7. ವ್ಯವಸ್ಥಾಪಕ ನಿರ್ದೇಶಕರು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕಲಬುರಗಿ.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ / ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

Scanned with OKEN Scanner